# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ –153 ಜಯನಗರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಜಯನಗರ ವಾರ್ಡ್–153 ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀಮತಿ. ವರಲಕ್ಷ್ಮಮ್ಮ ಎಲ್. ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರ ಅಪ್ಪಣೆ ಮೇರೆಗೆ ದಿನಾಂಕ:06/09/2022 ಮಂಗಳವಾರದಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಯನ್ನು ನಡೆಸಲಾಯಿತು.

ಹಾಜರಿದ್ದವರು:–

1. ಶ್ರೀಮತಿ. ವರಲಕ್ಷ್ಮಮ್ಮ ಎಲ್. ನೋಡಲ್ ಅಧಿಕಾರಿ ರವರು.
2. ಶ್ರೀ. ನವೀನ್‌ಕುಮಾರ್ ಕೆ. ಕಾರ್ಯದರ್ಶಿ.
3. ಶ್ರೀ. ಮೂರ್ತಿ, ಸಹಾಯಕ ಅಭಿಯಂತರರು, ವಿದ್ಯುತ್–ದಕ್ಷಿಣ.
4. ಶ್ರೀ. ಎಂ.ಎನ್. ಶಿವಕುಮಾರ್, ಕಿರಿಯ ಅಭಿಯಂತರರು ಬೆಸ್ಕಾಂ ಇಲಾಖೆ.
5. ಶ್ರೀ. ಜಿ.ಟಿ. ಬೊಮ್ಮೇಗೌಡ, ಕೆಲಸ ಪರಿವೀಕ್ಷಕರು ವಾರ್ಡ್–153
6. ಶ್ರೀ. ಮಕ್ಸೂದ್ ಖಾನ್, ತೋಟಗಾರಿಗೆ ಮೇಸ್ತ್ರಿ
7. ಶ್ರೀ. ಕೆ. ನಾರಾಯಣಸ್ವಾಮಿ, ಮೌಲ್ಯಮಾಪಕರು ವಾರ್ಡ್–153.
8. ಶ್ರೀ. ಹುಸೇನ್, ಎ.ಎಸ್.ಐ, ಮೈಕೋಲೇಔಟ್ ಸಂಚಾರ ಪೊಲೀಸ್ ಠಾಣೆ.
9. ಶ್ರೀ. ಮಂಜುನಾಥ್ ವಿ. ಪೊಲೀಸ್ ಇನ್ಸ್‌ಪೆಕ್ಟರ್, ಸಿದ್ಧಾಪುರ ಪೊಲೀಸ್ ಠಾಣೆ.
10. ವಾರ್ಡ್ ಸಂಖ್ಯೆ: 153ರ ಸ್ಥಳೀಯರಾದ ಶ್ರೀ. ಜಿ.ಎಸ್. ಬಾಲಾಜಿ, ಡಾ॥ ರಘುನಾಥ್, ಶ್ರೀ. ಬಿ.ಕೆ. ರಾಜಕುಮಾರ್, ಶ್ರೀ. ಆಸಿಫುಲ್ಲಾ ಶ್ರೀ. ಜಯಕೃಷ್ಣನ್, ಶ್ರೀ. ರಾಧಾಕೃಷ್ಣನ್ ಆರ್.ಎ, ಶ್ರೀ. ಅನೀಸ್ ಅಹಮದ್, ಶ್ರೀ. ಶಾನ್ ಅಹಮದ್, ಶ್ರೀ. ಸಲಾವುದ್ದೀನ್, ಶ್ರೀ. ಮುಜಾಯಿದ್, ಶ್ರೀ. ಸಲೀಮ್ ಮತ್ತು ಶ್ರೀ. ಸಮೀಉಲ್ಲಾ.

ಸಭೆಗೆ ಗೈರು ಹಾಜರಾದ ಇಲಾಖೆಗಳು:–

1. ಪೊಲೀಸ್ ಇನ್ಸ್‌ಪೆಕ್ಟರ್ ಬಸವನಗುಡಿ ಸಂಚಾರ ಮತ್ತು ಕಾನೂನು ವ್ಯವಸ್ಥೆ ಪೊಲೀಸ್ ಠಾಣೆ.
2. ಪೊಲೀಸ್ ಇನ್ಸ್‌ಪೆಕ್ಟರ್ ಜಯನಗರ ಸಂಚಾರ ಪೊಲೀಸ್ ಠಾಣೆ.
3. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಇಲಾಖೆಯ ಅಧಿಕಾರಿಗಳು.

*********



Scanned with CamScanner

1. ವಾರ್ಡ್-153 ರ ಕುಂದು ಕೊರತೆಗಳ ಬಗ್ಗೆ ಚರ್ಚಿಸುವ ಸಂಬಂಧ ದಿನಾಂಕ:06/09/2022 ಮಂಗಳವಾರದಂದು ಬೆಳಗ್ಗೆ 11.00 ಗಂಟೆಗೆ ನಿಗಧಿತ ಸಮಯಕ್ಕೆ ಸಭೆಯನ್ನು ಪ್ರಾರಂಭಿಸಲಾಯಿತು.

2. ನೋಡಲ್ ಅಧಿಕಾರಿಯವರು ಮಾತನಾಡಿ ಕಳೆದ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ ಕೈಗೊಂಡ ಕ್ರಮಗಳ ಕುರಿತು ಕಳೆದ ಸಭೆಯ ನಡವಳಿಗಳನ್ನು ಓದಲು ತಿಳಿಸಿದರು. ಅದರಂತೆ ವಾರ್ಡ್ ಅಭಿಯಂತರರು ಕಳೆದ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಕುರಿತು ಸಭೆಯಲ್ಲಿ ಪ್ರಸ್ತಾಪಿಸಿ ದೂರುಗಳಿಗೆ ಸಂಬಂಧಿಸಿದಂತೆ ಕೈಗೊಂಡ ಕ್ರಮಗಳ ಬಗ್ಗೆ ವಿವರಿಸಿದರು.

3. ವಾರ್ಡಿನ ಸ್ಥಳೀಯರಾದ ಶ್ರೀ. ಆಸೀಫುಲ್ಲಾ ರವರು ಮಾತನಾಡಿ ಬಿ.ಹೆಚ್.ಇ.ಎಲ್ ಲೇಔಟ್ ಸುತ್ತಾ-ಮುತ್ತಾ ಅಭಿವೃದ್ಧಿ ಕಾರ್ಯಗಳನ್ನು ಶೀಘ್ರವಾಗಿ ಕೈಗೊಂಡು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಕೋರಿದರು. ಈ ಬಗ್ಗೆ ವಾರ್ಡ್ ಅಭಿಯಂತರರು ಮಾತನಾಡಿ ಈಗಾಗಲೇ ಪಸಕ್ತ ಸಾಲಿನ ಕಾಮಗಾರಿ ಕಾರ್ಯಕ್ರಮ ಪಟ್ಟಿಯಲ್ಲಿ ಬಿ.ಹೆಚ್.ಇ.ಎಲ್ ಲೇಔಟ್ ಸುತ್ತಾ-ಮುತ್ತಾ ಚರಂಡಿಯಲ್ಲಿ ಹೂಳನ್ನು ತೆಗೆದು ಅಭಿವೃದ್ಧಿ ಮಾಡುವ ಕಾಮಗಾರಿಯನ್ನು ಕೈಗೊಳ್ಳಲು ಅಂದಾಜು ಪಟ್ಟಿ ಸಲ್ಲಿಸಲಾಗಿರುತ್ತದೆ. ಮೇಲಾಧಿಕಾರಿಗಳಿಂದ ಕಾಮಗಾರಿಗಳಿಗೆ ಕಾರ್ಯಾದೇಶ ದೊರೆತ ನಂತರ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಾಗುತ್ತದೆ ಎಂದು ತಿಳಿಸಿದರು.

ಕ್ರಮ: ವಾರ್ಡ್ ಅಭಿಯಂತರರು

4. ವಾರ್ಡಿನ ಸ್ಥಳೀಯರಾದ ಶ್ರೀ. ಆಸೀಫುಲ್ಲಾ ಮತ್ತು ಶ್ರೀ. ಜಯಕೃಷ್ಣ ರವರು ಮಾತನಾಡಿ ಬಿ.ಹೆಚ್.ಇ.ಎಲ್ ಲೇಔಟ್‌ನ ಸಿ.ಎ. ಸೈಟ್‌ನಲ್ಲಿ ಕಟ್ಟಡ ನಿರ್ಮಿಸಲು ಕಾಮಗಾರಿ ಪ್ರಾರಂಭಿಸಿದ್ದು, ಇದು ಯಾವ ಉದ್ದೇಶಕ್ಕಾಗಿ ಯಾರಿಗಾಗಿ ನಿರ್ಮಿಸುತ್ತಿದ್ದೀರಿ. ಇವುಗಳ ಮಾಹಿತಿಯನ್ನು ನೀಡುವಂತೆ ಹಾಗೂ ಸದರಿ ಜಾಗದಲ್ಲಿ ಯಾವುದೇ ಕಾಮಗಾರಿಯನ್ನು ಪ್ರಾರಂಭಿಸದಂತೆ ಕೋರಿದರು. ಈ ಬಗ್ಗೆ ವಾರ್ಡ್ ಅಭಿಯಂತರರು ಮಾತನಾಡಿ ಬಿ.ಹೆಚ್.ಇ.ಎಲ್ ಲೇಔಟ್‌ನಲ್ಲಿ ಸಿ.ಎ. ಸೈಟ್ ಪಾಲಿಕೆಯ ಸ್ವತ್ತಾಗಿದ್ದು, ಸದರಿ ಜಾಗದಲ್ಲಿ ಪಾಲಿಕೆಯ ವತಿಯಿಂದ ಶಟಲ್ ಬ್ಯಾಟ್‌ಮಿಂಟನ್ ಕೋರ್ಟ್ ಹಾಗೂ ಇತರೆ ಪಾಲಿಕೆ ಹಾಗೂ ಸಾರ್ವಜನಿಕ ಉಪಯೋಗಕ್ಕಾಗಿ ಕಟ್ಟಡ ನಿರ್ಮಿಸಲು ಉದ್ದೇಶಿಸಲಾಗಿರುತ್ತದೆ ಎಂದು ತಿಳಿಸಿದರು. ಈ ಬಗ್ಗೆ ಸದರಿಯವರು ಪ್ರಸ್ತಾಪಿತ ಸ್ಥಳದಲ್ಲಿ ಕಾಮಗಾರಿಯ ಕುರಿತು ನಾಮಫಲಕ ಅಳವಡಿಸುವಂತೆ ಸಹ ಕೋರಿದರು. ಈ ಬಗ್ಗೆ ವಾರ್ಡ್ ಅಭಿಯಂತರರು ಮಾತನಾಡಿ ನಾಮಫಲಕ ಅಳವಡಿಸಲಾಗುವುದೆಂದು ತಿಳಿಸಿದರು.

ಕ್ರಮ: ವಾರ್ಡ್ ಅಭಿಯಂತರರು



Scanned with CamScanner

5. ವಾರ್ಡಿನ ಸ್ಥಳೀಯರಾದ ಶ್ರೀ. ಸನಾವುಲ್ಲಾ ರವರು ಮಾತನಾಡಿ ಬಿ.ಹೆಚ್.ಇ.ಎಲ್ ಲೇಔಟ್‌ನಲ್ಲಿರುವ ಪಾರ್ಕ್‌ನಲ್ಲಿರುವ ವಿದ್ಯುತ್ ದೀಪಗಳು ಉರಿಯುತ್ತಿಲ್ಲ, ಇವುಗಳನ್ನು ಸರಿಪಡಿಸುವಂತೆ ಹಾಗೂ ಪಾರ್ಕ್‌ನಲ್ಲಿ ಅಳವಡಿಸಿರುವ ಜಿಮ್ ಪರಿಕರಗಳು ಹಾಳಾಗಿದ್ದು, ಇವುಗಳನ್ನು ಸರಿಪಡಿಸುವಂತೆ ಕೋರಿದರು. ಈ ಬಗ್ಗೆ ನೋಡಲ್ ಅಧಿಕಾರಿಯವರು ಮಾತನಾಡಿ ಸಭೆಯಲ್ಲಿ ಹಾಜರಿದ್ದ ಶ್ರೀ. ಮೂರ್ತಿ ಸಹಾಯಕ ಅಭಿಯಂತರರು ವಿದ್ಯುತ್-ದಕ್ಷಿಣ ರವರಿಗೆ ಸ್ಟ್ರೀಟ್‌ಲೈಟ್ ಸರಿಪಡಿಸುವಂತೆ ತಿಳಿಸಿದರು. ನಂತರ ವಾರ್ಡ್ ಅಭಿಯಂತರರು ಮಾತನಾಡಿ ಜಿಮ್ ಪರಿಕರಗಳ ಬಗ್ಗೆ ಕಾರ್ಯಪಾಲಕ ಅಭಿಯಂತರರು (ಯೋಜನೆ-ದಕ್ಷಿಣ) ರವರಿಗೆ ತಿಳಿಸುವುದಾಗಿ ಸಭೆಯಲ್ಲಿ ಹೇಳಿದರು.

**ಕ್ರಮ: ಕಾ.ಅ (ವಿದ್ಯುತ್-ದಕ್ಷಿಣ) ಮತ್ತು ಕಾ.ಅ (ಯೋಜನೆ-ದಕ್ಷಿಣ).**

6. ವಾರ್ಡಿನ ಸ್ಥಳೀಯರಾದ ಡಾ|| ರಘುನಾಥ್ ರವರು ಮಾತನಾಡಿ 3ನೇ ಅಡ್ಡರಸ್ತೆ, ಜಯನಗರ 1ನೇ ಬ್ಲಾಕ್ (ಅಶೋಕ ಪಿಲ್ಲರ್‌ನಿಂದ ಕೊನೆಯವರೆಗೆ) ಪ್ರತಿದಿನ ಕಸ ಸ್ವಚ್ಛಗೊಳಿಸುವಂತೆ ಹಾಗೂ ವಿಪರೀತವಾಗಿ ಡೆಬ್ರಿಸ್ ಇದ್ದು, ಅವುಗಳನ್ನು ತೆರವುಗೊಳಿಸಬೇಕೆಂದು ಕೋರಿದರು. ಈ ಬಗ್ಗೆ ವಾರ್ಡ್ ಅಭಿಯಂತರರು ಮಾತನಾಡಿ ಹಾಲಿ ವಾರ್ಡ್‌ನಲ್ಲಿ ಸಿಲ್ಟ್ ಅಂಡ್ ಟ್ರಾಕ್ಟರ್ ವ್ಯವಸ್ಥೆ ಇರುವುದಿಲ್ಲ. ಆದಾಗ್ಯೂ ಈ ಬಗ್ಗೆ ಪರಿಶೀಲಿಸಿ ಸದರಿ ಡೆಬ್ರಿಸ್‌ನ್ನು ತೆರವುಗೊಳಿಸಲಾಗುವುದೆಂದು ತಿಳಿಸಿದರು.

**ಕ್ರಮ : ವಾರ್ಡ್ ಅಭಿಯಂತರರು**

7. ವಾರ್ಡಿನ ಸ್ಥಳೀಯರಾದ ಡಾ|| ರಾಧಾಕೃಷ್ಣ ರವರು ಮಾತನಾಡಿ 7ನೇ ಅಡ್ಡರಸ್ತೆ, ತ್ರಿಕೋಣ ಉದ್ಯಾನವನದ ಹತ್ತಿರ ನೋ-ಪಾರ್ಕಿಂಗ್ ನಾಮಫಲಕ ಅಳವಡಿಸಿರುವುದಿಲ್ಲ. ಈ ಬಗ್ಗೆ ಹಲವಾರು ಬಾರಿ ಸಭೆಗಳಲ್ಲಿ ತಿಳಿಸಿದ್ದರೂ ಸಹ ಯಾವುದೇ ಕ್ರಮ ತೆಗೆದುಕೊಂಡಿರುವುದಿಲ್ಲ ಎಂದು ತಿಳಿಸಿದರು. ಈ ಬಗ್ಗೆ ನೋಡಲ್ ಅಧಿಕಾರಿಯವರು ಮಾತನಾಡಿ ಸಂಚಾರ ಪೊಲೀಸ್ ಠಾಣೆ, ಜಯನಗರ ರವರಿಗೆ ಈ ಬಗ್ಗೆ ಕ್ರಮ ಕೈಗೊಳ್ಳಲು ಹಾಗೂ ವಾರ್ಡ್ ಕಮಿಟಿ ಸಭೆಗೆ ಹಾಜರಾಗಲು ಪತ್ರ ಬರೆಯುವಂತೆ ವಾರ್ಡ್ ಅಭಿಯಂತರರಿಗೆ ತಿಳಿಸಿದರು.

**ಕ್ರಮ : ವಾರ್ಡ್ ಅಭಿಯಂತರರು**

8. ವಾರ್ಡಿನ ಸ್ಥಳೀಯರಾದ ಶ್ರೀಮತಿ. ಶಾನ್ ಅಹಮದ್ ರವರು ಮಾತನಾಡಿ ಮೊಹಮ್ಮಡನ್ ಬ್ಲಾಕ್‌ನಲ್ಲಿ ಕಸವನ್ನು ಹಸಿಕಸ ಒಣಕಸವಾಗಿ ವಿಂಗಡಿಸಿ ನೀಡುತ್ತಿದ್ದರೂ ಸಹ ಸದರಿಯವರು ಮಿಕ್ಸ್ ಮಾಡಿ ಕಸವನ್ನು ತೆಗೆದುಕೊಂಡು ಹೋಗುತ್ತಿದ್ದಾರೆ ಅಲ್ಲದೇ ಪ್ರತಿದಿ ಕಸ ತೆಗೆದುಕೊಂಡು ಹೋಗುತ್ತಿರುವುದಿಲ್ಲ ಇದರಿಂದ ಸಮಸ್ಯೆ ಉಂಟಾಗುತ್ತಿರುತ್ತದೆ.



Scanned with CamScanner

ಹಾಗೂ ಉಮರ್ ಷರೀಫ್ ರಸ್ತೆಯಲ್ಲಿ ರಸ್ತೆ ಉಬ್ಬನ್ನು ನಿರ್ಮಿಸುವಂತೆ ಕೋರಿದರು ಇದರಿಂದ ಸದರಿ ರಸ್ತೆಯಲ್ಲಿ ಆಗುವ ಅಪಘಾತವನ್ನು ತಡೆಯಲು ಅನುಕೂಲವಾಗುತ್ತದೆ ಎಂದು ತಿಳಿಸಿದರು. ಹಾಗೂ ಎಲ್.ಇ.ಡಿ ಲೈಟ್ಸ್‌ಗಳನ್ನು ಅಳವಡಿಸಲು ಕೋರಿದರು. ಈ ಬಗ್ಗೆ ನೋಡಲ್ ಅಧಿಕಾರಿಯವರು ಮಾತನಾಡಿ ಸರಿಯಾಗಿ ಕಸ ತೆಗೆದುಕೊಂಡು ಹೋಗುವ ಕುರಿತು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚನಾ ಪತ್ರ ನೀಡುವಂತೆ ತಿಳಿಸಿದರು. ಹಾಗೂ ರಸ್ತೆ ಉಬ್ಬು ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ಬಸವನಗುಡಿ ಸಂಚಾರ ಪೊಲೀಸ್ ಠಾಣೆ ರವರಿಗೆ ಪತ್ರ ಬರೆಯುವಂತೆ ವಾರ್ಡ್ ಅಭಿಯಂತರರಿಗೆ ತಿಳಿಸಿದರು. ನಂತರ ಎಲ್.ಇ.ಡಿ ಲೈಟ್ಸ್ ಅಳವಡಿಸುವ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು ವಿದ್ಯುತ್-ದಕ್ಷಿಣ ರವರಿಗೆ ತಿಳಿಸಿದರು.

**ಕ್ರಮ: ಕಿ.ಆ.ಪ, ಪೊಲೀಸ್ ಇನ್ಸ್‌ಪೆಕ್ಟರ್ ಹಾಗೂ ವಾರ್ಡ್ ಅಭಿಯಂತರರು**

9. ವಾರ್ಡಿನ ಸ್ಥಳೀಯರಾದ ಶ್ರೀ, ಸಮೀವುಲ್ಲಾ ರವರು ಮಾತನಾಡಿ 26ನೇ ಮುಖ್ಯರಸ್ತೆ, ತಿಲಕ್‌ನಗರ ಇಲ್ಲಿನ ಟ್ರಾಫಿಕ್ ಸಮಸ್ಯೆಯ ಕುರಿತು ಸುಮಾರು ಸಭೆಗಳಲ್ಲಿ ತಿಳಿಸಿದ್ದರೂ ಸಹ ಇದೂವರೆವಿಗೆ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ. ಆದ್ದರಿಂದ ಈ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಸಭೆಯಲ್ಲಿ ಕೋರಿದರು. ಈ ಬಗ್ಗೆ ನೋಡಲ್ ಅಧಿಕಾರಿಯವರು ಮಾತನಾಡಿ ಸಭೆಯಲ್ಲಿ ಹಾಜರಿದ್ದ ಮೈಕೋಲೇಔಟ್ ಸಂಚಾರ ಪೊಲೀಸ್ ಠಾಣೆ ಅಧಿಕಾರಿಯವರಿಗೆ ಈ ಬಗ್ಗೆ ಪರಿಶೀಲಿಸಿ ಸದರಿಯವರೊಡನೆ ಪ್ರಸ್ತಾಪಿತ ಸ್ಥಳಕ್ಕೆ ತೆರಳಿ ಕ್ರಮ ವಹಿಸುವಂತೆ ತಿಳಿಸಿದರು.

ಮೇಲಿನ ಎಲ್ಲಾ ಅಂಶಗಳನ್ನು ಕ್ರಮಬದ್ಧವಾಗಿ ನಿರ್ವಹಿಸಲು ಹಾಜರಿದ್ದ ಎಲ್ಲಾ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರಿಗೆ ತಿಳಿಸಿ ಮುಂದಿನ ಸಭೆಗೆ ಕಡ್ಡಾಯವಾಗಿ ಗೈರುಹಾಜರಾಗಿರುವ ಇತರೆ ಇಲಾಖೆಯವರು ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ತಿಳಿಸುತ್ತಾ ಸಭೆ ಮುಕ್ತಾಯಗೊಳಿಸಲಾಯಿತು.

(ನವೀನ್‌ಕುಮಾರ್ ಕೆ.)
ಕಾರ್ಯದರ್ಶಿ
ವಾರ್ಡ್-153 ಜಯನಗರ

(ವರಲಕ್ಷ್ಮಮ್ಮ ಎಲ್)
ನೋಡಲ್ ಅಧಿಕಾರಿ
ವಾರ್ಡ್-153 ಜಯನಗರ



Scanned with CamScanner